ಕರ್ನಾಟಕ ಸರ್ಕಾರ

ಡಿಸೆಂಬರ್ 16, 2016

# ನಾವು ನೆಮ್ಮದಿಯಿಂದ ಬದುಕು ಸಾಗಿಸಲು ಗಡಿಯಲ್ಲಿ ರಕ್ಷಣಾ ಕಾರ್ಯದಲ್ಲಿ ತೊಡಗಿರುವ ಸೈನಿಕ ಸೋದರರೇ ಕಾರಣ : ಸಿದ್ದರಾಮಯ್ಯ



**ಬೆಂಗಳೂರು, ಡಿಸೆಂಬರ್ 16:**

ನಾವು ನೆಮ್ಮದಿಯಿಂದ ಬದುಕು ಸಾಗಿಸಲು ಗಡಿಯಲ್ಲಿ ರಕ್ಷಣಾ ಕಾರ್ಯದಲ್ಲಿ ತೊಡಗಿರುವ ಸೈನಿಕ ಸೋದರರೇ ಕಾರಣ ಎಂದು ಮುಖ್ಯಮಂತ್ರಿ ಸಿದ್ದರಾಮಯ್ಯ ಅವರು ಇಲ್ಲಿ ಇಂದು ಬಣ್ಣಿಸಿದರು.

ನಗರದ ಬಸವೇಶ್ವರ ವೃತ್ತದ ಬಳಿ ಇರುವ ರಾಷ್ಟ್ರೀಯ ಸೈನಿಕ ಸ್ಮಾರಕದಲ್ಲಿ ವಿಜಯ ದಿವಸ್ ಕಾರ್ಯಕ್ರಮದಲ್ಲಿ ಹುತಾತ್ಮ ಯೋಧರಿಗೆ ಶ್ರದ್ಧಾಂಜಲಿ ಸಲ್ಲಿಸಿ ಮಾತನಾಡುತ್ತಿದ್ದ ಸಿದ್ದರಾಮಯ್ಯ ಅವರು 1971 ರಲ್ಲಿ ಭಾರತ ಮತ್ತು ಪಾಕಿಸ್ತಾನ ನಡುವೆ ನಡೆದ ಯುದ್ಧದಲ್ಲಿ ಶಸ್ತ್ರ ಸಜ್ಜಿತ ತೊಂಬತ್ತೊಂದು ಸಾವಿರ ಪಾಕಿಸ್ತಾನಿ ಸೈನಿಕರು ಭಾರತಕ್ಕೆ ಶರಣಾದರು. ಪಾಕಿಸ್ತಾನವು ಇಬ್ಭಾಗವಾಗಿ ಪೂರ್ವ ಪಾಕಿಸ್ತಾನವು ಬಾಂಗ್ಲಾದೇಶ ಎಂಬ ಹೊಸ ರಾಷ್ಟ್ರವಾಗಿ ಉದಯಿಸಿತು. ಭಾರತ ಮತ್ತು ಪಾಕಿಸ್ತಾನದ ನಡುವಿನ ಈ ಯುದ್ಧದಲ್ಲಿ ಕರ್ನಾಟಕದ 58 ಸೈನಿಕರೂ ಒಳಗೊಂಡಂತೆ 3800 ಭಾರತೀಯ ಸೈನಿಕರು ಹುತಾತ್ಮರಾದರು. ಅವರೆಲ್ಲರಿಗೂ ಗೌರವ ನಮನ ಸಲ್ಲಿಸಲು ಪ್ರತಿ ವರ್ಷವೂ ವಿಜಯ್ ದಿವಸ್ ಆಚರಿಸಲಾಗುತ್ತಿದೆ ಎಂದು ತಿಳಿಸಿದರು.

## ಸಂಪುಟ ವಿಸ್ತರಣೆ ಸದ್ಯಕ್ಕಿಲ್ಲ

ಅಬಕಾರಿ ಸಚಿವ ಹೆಚ್. ವೈ. ಮೇಟಿ ಅವರ ರಾಜೀನಾಮೆಯಿಂದ ತೆರವಾದ ಸ್ಥಾನಕ್ಕೆ ಹೊಸಬರನ್ನು ಯಾವಾಗ ಭರ್ತಿ ಮಾಡುತ್ತೀರಿ ? ಎಂಬ ಮಾಧ್ಯಮದವರ ಪ್ರಶ್ನೆಗೆ

ಸಚಿವ ಸ್ಥಾನಕ್ಕಾಗಿ ಯಾರೂ ಅರ್ಜಿ ಹಾಕಿಲ್ಲ. ರಾಜ್ಯ ಸಚಿವ ಸಂಪುಟ ವಿಸ್ತರಣೆ ಸಧ್ಯಕ್ಕಿಲ್ಲ ಎಂದು ಮುಖ್ಯಮಂತ್ರಿ ಸ್ಪಷ್ಟಪಡಿಸಿದರು.

ರಾಜ್ಯದಲ್ಲಿ ಕಾಂಗ್ರೆಸ್ ಸರ್ಕಾರವನ್ನು ಗುರಿಯಾಗಿಸಿಕೊಂಡು ಆದಾಯ ತೆರಿಗೆ ಇಲಾಖೆ ಹಾಗೂ ಜಾರಿ ನಿರ್ದೇಶನಾಲಯವು ದಾಳಿಗಳನ್ನು ನಡೆಯುತ್ತಿವೆಯೇ ? ಎಂಬ ಪ್ರಶ್ನೆಗೆ ಪ್ರತಿಕ್ರಿಯಿಸಿದ ಸಿದ್ದರಾಮಯ್ಯ ಅವರು ಅಪನಗದೀಕರಣದ ನಂತರ ರಾಷ್ಟ್ರದೆಲ್ಲೆಡೆ ಕಪ್ಪು ಹಣವನ್ನು ಬಿಳಿ ಮಾಡುವ ದಂಥೆ ನಡೆಯುತ್ತಿದೆ. ಆದಾಯ ತೆರಿಗೆ ಇಲಾಖೆ ಹಾಗೂ ಜಾರಿ ನಿರ್ದೇಶನಾಲಯದ ಅಧಿಕಾರಿಗಳು ಹಲವೆಡೆ ದಾಳಿ ನಡೆಸಿ ಅಕ್ರಮ ನಗದು ವಶಪಡಿಸಿ ಕೊಂಡಿದ್ದಾರೆ. ರಾಜ್ಯದ ವಿವಿಧೆಡೆಗಳಲ್ಲೂ ದಾಳಿಗಳು ನಡೆದಿವೆ, ನಡೆಯುತ್ತಿವೆ. ಇದನ್ನು ರಾಜಕೀಯ ದೃಷ್ಠಿಯಲ್ಲಿ ನೋಡಬಾರದು ಎಂದು ಅಭಿಪ್ರಾಯಪಟ್ಟರು.

ಗೃಹ ಸಚಿವ ಡಾ ಜಿ. ಪರಮೇಶ್ವರ್, ರಾಜ್ಯ ವಿಧಾನ ಪರಿಷತ್‌ನ ಸಭಾಪತಿ ಡಿ. ಹೆಚ್. ಶಂಕರ ಮೂರ್ತಿ, ಸದಸ್ಯ ಗಣೇಶ್ ಕಾರ್ನಿಕ್ ಸೇರಿದಂತೆ ಹಲವು ಗಣ್ಯರು, ಭಾರತೀಯ ಸೇನೆಯ ಹಿರಿಯ ಅಧಿಕಾರಿಗಳು ಈ ಕಾರ್ಯಕ್ರಮದಲ್ಲಿ ಪಾಲ್ಗೊಂಡಿದ್ದರು.

**********

ಡಿ ಪಿ ಎಂ